ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	1099
ಮಾನ್ಯ ಸದಸ್ಯರ ಹೆಸರು	ಶ್ರೀ ಬಿ.ಜಿ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ	15/03/2021
ಉತ್ತರಿಸುವ ಸಚಿವರು	ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು

ಕ್ರ. ಸಂ	ಪ್ರಶ್ನೆ	ಉತ್ತರ
ಅ)	ಕಲಬುರಗಿಯಲ್ಲಿ ಸ್ಥಾಪನೆಯಾಗಬೇಕಿದ್ದ ಏಮ್ಸ್ ಹುಬ್ಬಳ್ಳಿ-ಧಾರವಾಡಕ್ಕೆ ಸ್ಥಳಾಂತರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:	ಭಾರತ ಸರ್ಕಾರದ "ಪ್ರಧಾನ ಮಂತ್ರಿ ಸ್ವಸ್ಥ ಸುರಕ್ಷಾ ಯೋಜನೆ"ಯಡಿ "ಆಲ್ ಇಂಡಿಯಾ ಇನ್ಸ್‌ಟಿಟ್ಯೂಟ್ ಆಫ್ ಮೆಡಿಕಲ್ ಸೈನ್ಸಸ್" (AIMS) ಎಂಬ ಸೂಪರ್ ಸ್ಪೆಷಾಲಿಟಿ ಬೋಧಕ ಸಂಸ್ಥೆಯನ್ನು ವಿವಿಧ ರಾಜ್ಯಗಳಲ್ಲಿ ಪ್ರಾರಂಭಿಸುವ ಹೊಣೆಯು ಭಾರತ ಸರ್ಕಾರದ್ದಾಗಿರುತ್ತದೆ. ಅದರಂತೆ ಇಂತಹ ಸಂಸ್ಥೆಯನ್ನು ಹೊಂದುವ ರಾಜ್ಯಗಳಲ್ಲಿ ಕರ್ನಾಟಕ ರಾಜ್ಯವು ಒಂದಾಗಿರುತ್ತದೆ. ಈ ಯೋಜನೆಯ ಮಾನದಂಡಗಳನ್ವಯ ಅಂದಾಜು 200 ಎಕರೆ ಭೂಮಿ, ನಾಲ್ಕು ಪಥಗಳ ಸಾರಿಗೆ ಸಂಪರ್ಕ, ನೀರು, ವಿದ್ಯುತ್ ಸಂಪರ್ಕ ಮತ್ತು ಇತರೆ ಸೌಲಭ್ಯಗಳನ್ನು ಹೊಂದಿರುವ ಸ್ಥಳಗಳನ್ನು ರಾಜ್ಯ ಸರ್ಕಾರವು ಗುರುತಿಸಿ ಕೇಂದ್ರ ಸರ್ಕಾರಕ್ಕೆ ಕಳುಹಿಸಬೇಕಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಪ್ರಾರಂಭಿಕವಾಗಿ ರಾಮನಗರ, ಧಾರವಾಡ, ಬಿಜಾಪುರ, ಕಲಬುರಗಿ ಈ ಜಿಲ್ಲೆಗಳಲ್ಲಿ ಏಮ್ಸ್ ಸಂಸ್ಥೆಯನ್ನು ಪ್ರಾರಂಭಿಸಲು ಕೇಂದ್ರ ಸರ್ಕಾರಕ್ಕೆ ಪತ್ರ ಬರೆಯಲಾಗಿತ್ತು. ಜಿಲ್ಲಾಧಿಕಾರಿಗಳ ಕಾರ್ಯಾಲಯ, ಧಾರವಾಡ ಇವರ ದಿನಾಂಕ 18/09/2020 ರ ಪತ್ರದಲ್ಲಿ ಧಾರವಾಡ ತಾಲ್ಲೂಕಿನ ಇಟಗಟ್ಟಿ ಗ್ರಾಮದಲ್ಲಿ ಕರ್ನಾಟಕ ಕೈಗಾರಿಕ ಪ್ರದೇಶಾಭಿವೃದ್ಧಿ ಮಂಡಳಿ ಯಿಂದ ಭೂ ಸ್ವಾಧೀನ ಪಡಿಸಿಕೊಂಡಿರುವ ಜಾಗವು ಏಮ್ಸ್ ಸಂಸ್ಥೆಯನ್ನು ಪ್ರಾರಂಭಿಸುವುದಕ್ಕೆ ಹಾಗೂ ಕೇಂದ್ರ ಸರ್ಕಾರವು ನಿಗಧಿ ಪಡಿಸಿರುವ ಮಾನದಂಡಗಳನ್ನು ಪೂರೈಸಲು ಸದರಿ ಸ್ಥಳವು ಸೂಕ್ತವೆಂದು ನಿರ್ಣಯಕ್ಕೆ ಬಂದು, ಹುಬ್ಬಳ್ಳಿ-ಧಾರವಾಡದಲ್ಲಿನ ಜಾಗ ಮತ್ತು ಇತರೆ ಮಾಹಿತಿಯೊಂದಿಗೆ ಕೇಂದ್ರ ಸರ್ಕಾರಕ್ಕೆ ದಿನಾಂಕ 29/09/2020 ರಂದು ಪತ್ರ ಬರೆಯಲಾಗಿದೆ. ಕೇಂದ್ರ ಸರ್ಕಾರದ ತಪಾಸಣಾ ತಂಡವು ಈಗಾಗಲೇ ಗುರುತಿಸಲ್ಪಟ್ಟ ಜಾಗಕ್ಕೆ ದಿನಾಂಕ 02/12/2020 ರಂದು ಬಂದು ಪರಿವೀಕ್ಷಣೆ ಮಾಡಿರುತ್ತಾರೆ. ಏಮ್ಸ್ ಸಂಸ್ಥೆಯನ್ನು ಪ್ರಾರಂಭಿಸುವ ಯೋಜನೆಯು ಕೇಂದ್ರ ಸರ್ಕಾರದ್ದಾಗಿರುವುದರಿಂದ ಇದುವರೆವಿಗೂ ಯಾವುದೇ ಸ್ಥಳದಲ್ಲಿ ಏಮ್ಸ್ ಸಂಸ್ಥೆಯನ್ನು ಪ್ರಾರಂಭಿಸಿರುವುದಿಲ್ಲ.
ಆ)	ಬಂದಿದ್ದಲ್ಲಿ, ಏಮ್ಸ್ ಹುಬ್ಬಳ್ಳಿ-ಧಾರವಾಡಕ್ಕೆ ಸ್ಥಳಾಂತರಿಸಲು ಕಾರಣಗಳೇನು? (ವಿವರ ನೀಡುವುದು)	
ಇ)	ಕಲಬುರಗಿಯಲ್ಲಿ ಏಮ್ಸ್ ಸ್ಥಾಪಿಸಲು ಮರುಚಿಂತನೆ ಮಾಡುವ ಯೋಜನೆ ಸರ್ಕಾರದ ಮುಂದಿದೆಯೇ? (ವಿವರ ನೀಡುವುದು)	

ಸಂಖ್ಯೆ: ಎಂಇಡಿ 159 ಎಂಎಂಸಿ 2021

(ಡಾ|| ಕೆ. ಸುಧಾಕರ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ
ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು